**ಬ್ರೆಜಿಲ್‌ನ ರಿಯೋ ಡಿ ಜನ್ನೈರೋದಲ್ಲಿ ನಡೆಯುತ್ತಿರುವ 17 ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಪ್ರಧಾನಮಂತ್ರಿಯವರು ಭಾಗವಹಿಸಿದರು (ಜುಲೈ 06, 2025)**

ಜುಲೈ 06, 2025

ಬ್ರೆಜಿಲ್‌ನ ರಿಯೋ ಡಿ ಜನ್ನೈರೋದಲ್ಲಿ 2025 ರ ಜುಲೈ 6-7 ರಂದು ನಡೆಯುತ್ತಿರುವ 17 ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಭಾಗವಹಿಸಿದ್ದರು. ಜಾಗತಿಕ ಆಡಳಿತ ಸುಧಾರಣೆ, ಜಾಗತಿಕ ದಕ್ಷಿಣದ ಧ್ವನಿಯನ್ನು ಬಲಪಡಿಸುವುದು, ಶಾಂತಿ ಮತ್ತು ಭದ್ರತೆ, ಬಹುಪಕ್ಷೀಯತೆ ಬಲಪಡಿಸುವುದು, ಅಭಿವೃದ್ಧಿ ಸಮಸ್ಯೆಗಳು ಮತ್ತು ಕೃತಕ ಬುದ್ಧಿಮತ್ತೆ ಸೇರಿದಂತೆ ಬ್ರಿಕ್ಸ್ ಕಾರ್ಯಸೂಚಿಯಲ್ಲಿನ ಅನೇಕ ವಿಷಯಗಳ ಕುರಿತು ನಾಯಕರು ಉತ್ಪಾದಕ ಚರ್ಚೆಗಳನ್ನು ನಡೆಸಿದರು.  ಪ್ರಧಾನಮಂತ್ರಿ ಅವರು ಶೃಂಗಸಭೆಯ ಯಶಸ್ವಿ ಸಂಘಟನೆಗಾಗಿ ಮತ್ತು ಆತ್ಮೀಯ ಆತಿಥ್ಯಕ್ಕಾಗಿ ಬ್ರೆಜಿಲ್‌ನ ಅಧ್ಯಕ್ಷರಿಗೆ ಧನ್ಯವಾದಗಳನ್ನು ಸಲ್ಲಿಸಿದರು.

2. "ಜಾಗತಿಕ ಆಡಳಿತ ಸುಧಾರಣೆ ಮತ್ತು ಶಾಂತಿ ಮತ್ತು ಭದ್ರತೆ" ಕುರಿತಾದ ಉದ್ಘಾಟನಾ ಅಧಿವೇಶನವನ್ನು ಪ್ರಧಾನಿಯವರು ಉದ್ಘಾಟಿಸಿದರು.  ನಂತರ ಪ್ರಧಾನಮಂತ್ರಿಯವರು, "ಬಹುಪಕ್ಷೀಯ, ಆರ್ಥಿಕ-ಹಣಕಾಸು ವ್ಯವಹಾರಗಳು ಮತ್ತು ಕೃತಕ ಬುದ್ಧಿಮತ್ತೆಯನ್ನು ಬಲಪಡಿಸುವುದು" ಕುರಿತಾದ ಅಧಿವೇಶನದಲ್ಲಿ ಮಾತನಾಡಿದರು. ಈ ಅಧಿವೇಶನದಲ್ಲಿ ಬ್ರಿಕ್ಸ್ ಪಾಲುದಾರರು ಮತ್ತು ಆಹ್ವಾನಿತ ದೇಶಗಳು ಭಾಗವಹಿಸಿದ್ದವು.

3. ಜಾಗತಿಕ ಆಡಳಿತ ಮತ್ತು ಶಾಂತಿ ಮತ್ತು ಭದ್ರತೆಯ ಕುರಿತಾದ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿಯವರು, ಜಾಗತಿಕ ದಕ್ಷಿಣದ ಧ್ವನಿಯನ್ನು ಬಲಪಡಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು.  ಹವಾಮಾನ ಹಣಕಾಸು ಮತ್ತು ತಂತ್ರಜ್ಞಾನ ಪ್ರವೇಶದ ವಿಷಯದಲ್ಲಿ ಅಭಿವೃದ್ಧಿಶೀಲ ದೇಶಗಳಿಗೆ ಸುಸ್ಥಿರ ಅಭಿವೃದ್ಧಿಗೆ ಹೆಚ್ಚಿನ ಬೆಂಬಲದ ಅಗತ್ಯವಿದೆ ಎಂದು ಅವರು ಹೇಳಿದರು.  20 ನೇ ಶತಮಾನದ ಜಾಗತಿಕ ಸಂಸ್ಥೆಗಳು 21 ನೇ ಶತಮಾನದ ಸವಾಲುಗಳನ್ನು ಎದುರಿಸುವ ಸಾಮರ್ಥ್ಯವನ್ನು ಹೊಂದಿಲ್ಲ ಎಂದು ಪ್ರತಿಪಾದಿಸಿದ ಅವರು, ಅವುಗಳನ್ನು ಸುಧಾರಿಸುವ ಅಗತ್ಯವನ್ನು ಒತ್ತಿಹೇಳಿದರು. ಬಹುಧ್ರುವೀಯ ಮತ್ತು ಎಲ್ಲರನ್ನೂ ಒಳಗೊಂಡ ವಿಶ್ವ ಕ್ರಮಕ್ಕೆ ಕರೆ ನೀಡಿದ ಪ್ರಧಾನಮಂತ್ರಿ ಅವರು, ವಿಶ್ವಸಂಸ್ಥೆಯ ಭದ್ರತಾ ಮಂಡಳಿ, IMF, ವಿಶ್ವ ಬ್ಯಾಂಕ್ ಮತ್ತು WTO ಮುಂತಾದ ಜಾಗತಿಕ ಆಡಳಿತ ಸಂಸ್ಥೆಗಳು ಸಮಕಾಲೀನ ವಾಸ್ತವಗಳನ್ನು ಪ್ರತಿಬಿಂಬಿಸಲು ತುರ್ತು ಸುಧಾರಣೆಗೆ ಒಳಗಾಗಬೇಕು ಎಂದು ಹೇಳಿದರು.  ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆಯ ತುರ್ತುಸ್ಥಿತಿಯನ್ನು ಎತ್ತಿ ತೋರಿಸಿದ ಮತ್ತು ಶೃಂಗಸಭೆಯ ಘೋಷಣೆಯಲ್ಲಿ ಈ ವಿಷಯದ ಬಗ್ಗೆ ಬಲವಾದ ಹೇಳಿಕೆಯನ್ನು ನೀಡಿದ ನಾಯಕರಿಗೆ ಅವರು ಧನ್ಯವಾದ ಸಲ್ಲಿಸಿದರು.

4. ಶಾಂತಿ ಮತ್ತು ಭದ್ರತೆಯ ಬಗ್ಗೆ ಮಾತನಾಡುತ್ತಾ, ಭಯೋತ್ಪಾದನೆಯು ಮಾನವೀಯತೆಯು ಎದುರಿಸುತ್ತಿರುವ ಗಂಭೀರ ಸಮಸ್ಯೆಯಾಗಿದೆ ಎಂದು ಪ್ರಧಾನಿಯವರು ಒತ್ತಿ ಹೇಳಿದರು.  ಈ ಸಂದರ್ಭದಲ್ಲಿ, ಏಪ್ರಿಲ್ 2025 ರಲ್ಲಿ ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯು ಕೇವಲ ಭಾರತದ ಮೇಲಿನ ದಾಳಿಯಾಗಿಲ್ಲ, ಅದು ಸಂಪೂರ್ಣ ಮಾನವೀಯತೆಯ ಮೇಲೆ ನಡೆದ ದಾಳಿಯಾಗಿದೆ ಎಂದು ಅವರು ಹೇಳಿದರು. ಭಯೋತ್ಪಾದನೆಯ ವಿರುದ್ಧ ಬಲವಾದ ಜಾಗತಿಕ ಕ್ರಮಕ್ಕೆ ಕರೆ ನೀಡಿದ ಪ್ರಧಾನಮಂತ್ರಿ ಅವರು, ಭಯೋತ್ಪಾದಕರಿಗೆ ಹಣಕಾಸು ಒದಗಿಸುವ, ಉತ್ತೇಜನ ನೀಡುವ ಅಥವಾ ಸುರಕ್ಷಿತ ಸ್ಥಳ ಒದಗಿಸುವವರನ್ನು ಕಠಿಣ ಕ್ರಮಗಳ ಮೂಲಕ ಎದುರಿಸಬೇಕು ಎಂದು ಹೇಳಿದರು. ಭಯೋತ್ಪಾದನೆಯನ್ನು ಎದುರಿಸುವಲ್ಲಿ ಯಾವುದೇ ದ್ವಿಮುಖ ನೀತಿ ಇರಬಾರದು ಎಂದು ಅವರು ಒತ್ತಿ ಹೇಳಿದರು. ಪಹಲ್ಗಾಮ್ ಭಯೋತ್ಪಾದನಾ ದಾಳಿಯನ್ನು ಕಠಿಣ ಪದಗಳಲ್ಲಿ ಖಂಡಿಸಿದ ಬ್ರಿಕ್ಸ್ ನಾಯಕರಿಗೆ ಅವರು ಧನ್ಯವಾದ ಸಲ್ಲಿಸಿದರು.  ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸಲು ಬ್ರಿಕ್ಸ್ ದೇಶಗಳಿಗೆ ಕರೆ ನೀಡಿದ ಅವರು, ಭಯೋತ್ಪಾದನೆಯನ್ನು ಎದುರಿಸುವಲ್ಲಿ ಶೂನ್ಯ ಸಹಿಷ್ಣುತೆ ಇರಬೇಕು ಎಂದು ಒತ್ತಿ ಹೇಳಿದರು.

5. ಈ ವಿಷಯದ ಬಗ್ಗೆ ಇನ್ನಷ್ಟು ವಿವರಿಸಿದ ಪ್ರಧಾನಮಂತ್ರಿ ಅವರು, ಪಶ್ಚಿಮ ಏಷ್ಯಾದಿಂದ ಯುರೋಪ್‌ವರೆಗಿನ ಸಂಘರ್ಷಗಳು ಅಪಾರ ಕಳವಳದ ವಿಷಯವಾಗಿವೆ ಎಂದು ಹೇಳಿದರು. ಅಂತಹ ಸಂಘರ್ಷಗಳನ್ನು ಪರಿಹರಿಸಲು ಭಾರತ ಯಾವಾಗಲೂ ಸಂವಾದ ಮತ್ತು ರಾಜತಾಂತ್ರಿಕತೆಗೆ ಕರೆ ನೀಡಿದೆ ಮತ್ತು ಅಂತಹ ಪ್ರಯತ್ನಗಳಿಗೆ ಕೊಡುಗೆ ನೀಡಲು ಸಿದ್ಧವಾಗಿದೆ ಎಂದು ಅವರು ಹೇಳಿದರು.

6. ''ಬಹುಪಕ್ಷೀಯತೆ, ಆರ್ಥಿಕ-ಹಣಕಾಸು ವ್ಯವಹಾರಗಳು ಮತ್ತು ಕೃತಕ ಬುದ್ಧಿಮತ್ತೆಯನ್ನು ಬಲಪಡಿಸುವುದು" ಕುರಿತಾದ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿ ಅವರು, ವೈವಿಧ್ಯತೆ ಮತ್ತು ಬಹುಧ್ರುವೀಯತೆಯು ಬ್ರಿಕ್ಸ್‌ನ ಮೌಲ್ಯಯುತ ಸಾಮರ್ಥ್ಯಗಳಾಗಿವೆ ಎಂದು ಅಭಿಪ್ರಾಯಪಟ್ಟರು. ವಿಶ್ವ ವ್ಯವಸ್ಥೆಯು ಒತ್ತಡದಲ್ಲಿರುವಾಗ ಮತ್ತು ಜಾಗತಿಕ ಸಮುದಾಯವು ಅನಿಶ್ಚಿತತೆ ಮತ್ತು ಸವಾಲುಗಳನ್ನು ಎದುರಿಸುತ್ತಿರುವ ಸಮಯದಲ್ಲಿ, ಬ್ರಿಕ್ಸ್‌ನ ಪ್ರಸ್ತುತತೆಯು ಸ್ಪಷ್ಟವಾಗಿದೆ ಎಂದು ಅವರು ಹೇಳಿದರು. ಬಹುಧ್ರುವೀಯ ಜಗತ್ತನ್ನು ರೂಪಿಸುವಲ್ಲಿ ಬ್ರಿಕ್ಸ್ ಪ್ರಮುಖ ಪಾತ್ರವನ್ನು ವಹಿಸಬಹುದು ಎಂದು ಅವರು ಹೇಳಿದರು.  ಈ ನಿಟ್ಟಿನಲ್ಲಿ, ಅವರು ನಾಲ್ಕು ಸಲಹೆಗಳನ್ನು ನೀಡಿದರು: ಒಂದು, ಯೋಜನೆಗಳನ್ನು ಮಂಜೂರು ಮಾಡುವಾಗ ಬ್ರಿಕ್ಸ್ ಹೊಸ ಅಭಿವೃದ್ಧಿ ಬ್ಯಾಂಕ್ ಬೇಡಿಕೆ ಆಧಾರಿತ ತತ್ವ ಮತ್ತು ದೀರ್ಘಾವಧಿಯ ಸುಸ್ಥಿರತೆಯನ್ನು ಅನುಸರಿಸಬೇಕು; ಎರಡು, ಜಾಗತಿಕ ದಕ್ಷಿಣ ದೇಶಗಳಿಗೆ ಪ್ರಯೋಜನ ನೀಡುವಂತಹ ವಿಜ್ಞಾನ ಮತ್ತು ಸಂಶೋಧನಾ ಭಂಡಾರ ಸ್ಥಾಪಿಸುವುದನ್ನು ಗುಂಪು ಪರಿಗಣಿಸಬೇಕು; ಮೂರು, ನಿರ್ಣಾಯಕ ಖನಿಜಗಳ ಪೂರೈಕೆ ಸರಪಳಿಯನ್ನು ಸುರಕ್ಷಿತ ಮತ್ತು ಸ್ಥಿತಿಸ್ಥಾಪಕವಾಗಿಸಲು ಗಮನ ನೀಡಬೇಕು; ಮತ್ತು, ನಾಲ್ಕು, ಜವಾಬ್ದಾರಿಯುತ AI ಗಾಗಿ ಗುಂಪು ಕೆಲಸ ಮಾಡಬೇಕು - AI ಆಡಳಿತದ

ಕಾಳಜಿಗಳನ್ನು ಪರಿಶೀಲಿಸುತ್ತಾ, ಈ ಕ್ಷೇತ್ರದಲ್ಲಿ ನಾವೀನ್ಯತೆಯನ್ನು ಉತ್ತೇಜಿಸಲು ಇದು ಸಮಾನ ಪ್ರಾಮುಖ್ಯತೆಯನ್ನು ನೀಡಬೇಕು.

7. ನಾಯಕರ ಅಧಿವೇಶನದ ಮುಕ್ತಾಯದಲ್ಲಿ, ಸದಸ್ಯ ರಾಷ್ಟ್ರಗಳು 'ರಿಯೋ ಡಿ ಜನ್ಯೆರೋ ಘೋಷಣೆ'ಯನ್ನು ಅಂಗೀಕರಿಸಿದವು [Link].  ಜಾಗತಿಕ ಆಡಳಿತ [Link], ಶಾಂತಿ ಮತ್ತು ಭದ್ರತೆ [Link] ಮತ್ತು ಬಹುಪಕ್ಷೀಯತೆ, ಆರ್ಥಿಕ-ಹಣಕಾಸು ವ್ಯವಹಾರಗಳು ಮತ್ತು ಕೃತಕ ಬುದ್ಧಿಮತ್ತೆ [Link] ಕುರಿತಾದ ಅಧಿವೇಶನಗಳಲ್ಲಿ ಪ್ರಧಾನಮಂತ್ರಿಯವರ ಪೂರ್ಣ ಭಾಷಣವನ್ನು ಇಲ್ಲಿ ನೋಡಬಹುದು.

ರಿಯೋ ಡಿ ಜನ್ಯೆರೊ

ಜುಲೈ 06, 2025